# ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 236
2. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 15/02/2024
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಪ್ರಶ್ನೆ | ಉತ್ತರ |
|---|---|
| ಅ) ಸರ್ಕಾರವು ರಾಘವೇಂದ್ರ ಔರಾದ್ಕರ್ ಸಮಿತಿಯ ವರದಿಯನ್ನು ಸಂಪೂರ್ಣವಾಗಿ ಜಾರಿಗೊಳಿಸಿದೆಯೇ:<br><br>ಆ) ಇಲ್ಲವಾದಲ್ಲಿ ವರದಿಯನ್ನು ಸಂಪೂರ್ಣವಾಗಿ ಜಾರಿಗೊಳಿಸದಿರಲು ಇರುವಂತಹ ತೊಂದರೆಗಳೇನು; | ಶ್ರೀ ರಾಘವೇಂದ್ರ ಔರಾದ್ಕರ್ ವರದಿಯ ಶಿಫಾರಸ್ಸುಗಳನ್ನು ಸರ್ಕಾರವು ಭಾಗಶ: ಅಂಗೀಕರಿಸಿ ಅನುಯಾಯಿ, ಜಮೇದಾರ್ ಅನುಯಾಯಿ, ಪಿಎಸ್ಐ ಹಾಗೂ ಪೊಲೀಸ್ ಉಪಾಧೀಕ್ಷಕರುಗಳ ವೇತನ ಶ್ರೇಣಿಗಳನ್ನು ಹೊರತುಪಡಿಸಿ ಇತರೆ ಎಲ್ಲಾ ವೃಂದದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರ ವೇತನ ಶ್ರೇಣಿಗಳನ್ನು ಪರಿಷ್ಕರಣೆ ಮಾಡಿರುತ್ತದೆ.<br><br>ಅಧಿಕಾರಿ ಮತ್ತು ಸಿಬ್ಬಂದಿಯವರ ಭತ್ಯೆಗಳ ಪರಿಷ್ಕರಣೆಗೆ ಮಾಡಿದ್ದ ಶಿಫಾರಸ್ಸುಗಳಲ್ಲಿ ಗಂಡಾಂತರ ಭತ್ಯೆ, ಶ್ರಮದಾನ ಭತ್ಯೆ ಹಾಗೂ ಸದೃಢ ಭತ್ಯೆಗಳನ್ನು ಹೊರತುಪಡಿಸಿ, ಕಷ್ಟ ಪರಿಹಾರ ಭತ್ಯೆ, ಸಮವಸ್ತ್ರ ಭತ್ಯೆ ಹಾಗೂ ಸಾರಿಗೆ ಭತ್ಯೆಗಳನ್ನು ಪರಿಷ್ಕರಣೆ ಮಾಡಲಾಗಿರುತ್ತದೆ. |
| ಇ) ಔರಾದ್ಕರ್ ಸಮಿತಿಯ ವರದಿಯನ್ನು ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಯಾವುದೇ ಆಕ್ಷೇಪಣೆ ಇಲ್ಲದೆ ಒಪ್ಪಿರುವರೇ; ಹಾಗಿಲ್ಲದಿದ್ದಲ್ಲಿ ಇಲಾಖಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದ ಆಕ್ಷೇಪಣಗಳೇನು? (ವಿವರವನ್ನು ಒದಗಿಸುವುದು) | ಔರಾದ್ಕರ್ ಸಮಿತಿಯ ವರದಿಯ ಬಗ್ಗೆ ಯಾವುದೇ ಆಕ್ಷೇಪಣೆ ಸ್ವೀಕೃತವಾಗಿರುವುದಿಲ್ಲ. |
| ಈ) ಔರಾದ್ಕರ್ ಸಮಿತಿಯ ವರದಿಯನ್ನು ಮರು ಪರಿಶೀಲಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ? | ಇಲ್ಲ |

**ಕಡತ ಸಂಖ್ಯೆ: HD/16/EFS/2024**

(ಡಾ. ಪರಮೇಶ್ವರ್ ಜಿ)
ಗೃಹ ಸಚಿವರು